# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 24/06/2021

### ಶಾಸಕರ ಭವನಕ್ಕೂ ವಕ್ಕರಿಸಿತೇ ಕರೊನಾ

ಬೆಂಗಳೂರು: ಆಡಳಿತದ ಶಕ್ತಿ ಕೇಂದ್ರ ವಿಕಾಸಸೌಧದಲ್ಲಿ ಕಾಣಿಸಿಕೊಂಡಿದ್ದ ಕರೊನಾ ವೈರಾಣು, ಇದೀಗ ಶಾಸಕರ ಭವನಕ್ಕೂ ಬಂದಿದೆ ಎಂಬ ಅನುಮಾನ ಮೂಡಿದೆ. ಶಾಸಕರ ಭವನದಲ್ಲಿ ಕಾರು ತೊಳೆಯುತ್ತಿದ್ದ ವ್ಯಕ್ತಿಯೊಬ್ಬರು ಅನಾರೋಗ್ಯಕ್ಕೆ ಒಳಗಾಗಿದ್ದಾರೆ. ಅಲ್ಲದೆ, ದಲಾಯತ್ ಆಗಿ ಲಿಫ್ಟ್ ಆಪರೇಟರ್ ಕರ್ತವ್ಯ ನಿರ್ವಹಿಸುತ್ತಿರುವ ವ್ಯಕ್ತಿ, ಅವರ ಪತ್ನಿ ಹಾಗೂ ಪುತ್ರ ತೀವ್ರಜ್ವರದಿಂದ ಬಳಲುತ್ತಿದ್ದು ಕೆ.ಸಿ. ಜನರಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಇವರೆಲ್ಲರಿಗೂ ಕರೊನಾ ಟೆಸ್ಟ್ ಮಾಡಿಸಲಾಗಿದ್ದು, ವರದಿ ಬುಧವಾರ ಸಂಜೆ ಅಥವಾ ಗುರುವಾರ ಬರಲಿದೆ. ಎಎಸ್ಐಗೆ ಸೋಂಕು ದೃಢವಾದ ಹಿನ್ನೆಲೆ ಮಂಗಳವಾರ ಸಂಜೆ ಶಾಸಕರ ಭವನದ ಎಲ್ಲ ಅಂಗಡಿಗಳನ್ನು ಬಂದ್ ಮಾಡಿಸಲಾಗಿದೆ. ಬುಧವಾರ ಬೆಳಗ್ಗೆಯಿಂದ ಇಡೀ ಕಟ್ಟಡಕ್ಕೆ ಸ್ಯಾನಿಟೈಸ್ ಮಾಡಲಾಗುತ್ತದೆ. ಲಾಕ್‌ಡೌನ್ ತೆರವಾದ ಕೂಡಲೇ ಶಾಸಕರ ಭವನ ತುಂಬಿ ತುಳುಕುತ್ತಿದೆ. ಸಚಿವರೆಲ್ಲ ಈಗ ಬೆಂಗಳೂರಿನಲ್ಲಿಯೇ ಇರುವುದರಿಂದ ಅವರನ್ನು ನೋಡಲು ಶಾಸಕರೊಂದಿಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಬರಲಾರಂಭಿಸಿದ್ದಾರೆ. ಪ್ರತಿ ಶಾಸಕರ ಕಾರಿನಲ್ಲಿ 8-10 ಜನ ತುಂಬಿರುತ್ತಾರೆ. ಹೋಟೆಲ್‌ಗಳು ಇಲ್ಲದೆ ಇರುವುದರಿಂದ ಬಹುತೇಕರು ಶಾಸಕರ ಭವನವನ್ನೇ ಆಶ್ರಯಿಸಿದ್ದಾರೆ. ಹೀಗಾಗಿ ಇಲ್ಲಿ ಜನಸಂದಣಿ ಹೆಚ್ಚಾಗಿದೆ ಎಂಬ ದೂರುಗಳಿವೆ. ಕರೊನಾ ನಿಯಂತ್ರಣಕ್ಕೆ ಬರುವ ತನಕ ಶಾಸಕರ ಭವನಕ್ಕೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸುವ ಬಗ್ಗೆಯೂ ಸಭಾಪತಿ ಹಾಗೂ ಸ್ಪೀಕರ್ ಜತೆ ಚರ್ಚೆ ಮಾಡಲು ಅಧಿಕಾರಿಗಳು ನಿರ್ಧರಿಸಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ.